## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಬಕವಿ–ಬನಹಟ್ಟಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ (ಪರಿಷ್ಕೃತ–I) ಸರ್ಕಾರದ ಅಂತಿಮ ಅನುಮೋದನೆಯನ್ನು ನೀಡುವ ಬಗ್ಗೆ.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ. ನಅಇ 81 ಬೆಮಪ್ರಾ 2008, ದಿನಾಂಕ: 27.5.2008.

2) ರಬಕವಿ–ಬನಹಟ್ಟಿ ನಗರ ಯೋಜನಾ ಪ್ರಾಧಿಕಾರದ ಪತ್ರ ಸಂಖ್ಯೆ. ನಯೋಪ್ರಾರಬ:ಬಮಾಪ್ಲಾ(ಪರಿಷ್ಕೃತ–I)09-10/26, ದಿನಾಂಕ: 19.2.2010.

3) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ ಇವರ ಏಕ ಕಡತ ಸಂಖ್ಯೆ. ನಗ್ರಾಯೋ(6):ಉನಿI:ರಬಯೋಪ್ರಾರ/43/12/2009, ದಿನಾಂಕ: 12.3.2010 ರಲ್ಲಿ ನೀಡಿರುವ ಅಭಿಪ್ರಾಯ.

ಪ್ರಸ್ತಾವನೆ:

ಮೇಲೆ ಓದಲಾದ (1) ರ ಸರ್ಕಾರದ ಆದೇಶದಲ್ಲಿ, ರಬಕವಿ–ಬನಹಟ್ಟಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ (ಪರಿಷ್ಕೃತ–I) ಗೆ ತಾತ್ಕಾಲಿಕ ಅನುಮೋದನೆಯನ್ನು ನೀಡಲಾಗಿದೆ.

ಮೇಲೆ ಓದಲಾದ (2) ರ ಪತ್ರದಲ್ಲಿ ರಬಕವಿ–ಬನಹಟ್ಟಿ ನಗರ ಯೋಜನಾ ಪ್ರಾಧಿಕಾರವು ರಬಕವಿ–ಬನಹಟ್ಟಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾ ಯೋಜನೆಯ (ಪರಿಷ್ಕೃತ–I) ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(1) ರನ್ವಯ ಅಗತ್ಯ ಕ್ರಮ ಜರುಗಿಸಿ, ಮಹಾ ಯೋಜನೆಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ, ಸರ್ಕಾರದ ಅಂತಿಮ ಅನುಮೋದನೆಗೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (3) ರ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಏಕ ಕಡತದಲ್ಲಿ ರಬಕವಿ–ಬನಪಟ್ಟಿ ಪಟ್ಟಣದ ಜನಸಂಖ್ಯೆಯು 2021 ರಲ್ಲಿ 1,25,000 ಗಳಷ್ಟು ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾ ಯೋಜನೆಯನ್ನು ತಯಾರಿಸಲಾಗಿದೆ. ರಬಕವಿ–ಬನಹಟ್ಟಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶದ 8499 ಹೆಕ್ಟೇರ್ ಪ್ರದೇಶದಲ್ಲಿ 1700 ಹೆಕ್ಟೇರ್ ಪ್ರದೇಶವನ್ನು ನಗರೀಕರಣದ ಎಲ್ಲೆಯೆಂದು ಪ್ರಸ್ತಾಪಿಸಿ ಯೋಜನೆಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 12 ರಲ್ಲಿನ ಅಂಶಗಳನ್ನು ಪರಿಗಣಿಸಿ, ಪಟ್ಟಣದ ಮುಂದಿನ ಯೋಜಿತ ಬೆಳವಣಿಗೆಗಳಿಗಾಗಿ ಪ್ರಸ್ತಾಪಿಸಿರುವ 1700 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 853.40 ಹೆಕ್ಟೇರ್ (ಶೇ.50.20), ವಾಣಿಜ್ಯಕ್ಕಾಗಿ 78.20 ಹೆಕ್ಟೇರ್ (ಶೇ.04.60), ಕೈಗಾರಿಕೆಗಾಗಿ 140.25 ಹೆಕ್ಟೇರ್ (ಶೇ.8.25), ಸಾರ್ವಜನಿಕ/ ಅರೆ ಸಾರ್ವಜನಿಕ ಉಪಯೋಗಕ್ಕಾಗಿ 147.50 ಹೆಕ್ಟೇರ್ (ಶೇ.8.68), ನಾಗರೀಕ ಸೌಲಭ್ಯಕ್ಕಾಗಿ 2.00

ಹೆಕ್ಟೇರ್ (ಶೇ.0.12), ಉದ್ಯಾನವನ/ ಬಯಲು ಜಾಗೆಗಳಿಗೆ 181.15 ಹೆಕ್ಟೇರ್ (ಶೇ.10.65), ಸಾರಿಗೆ/ ಸಂಪರ್ಕ ವಲಯಕ್ಕೆ 297.50 ಹೆಕ್ಟೇರ್ (ಶೇ.17.50), ಪ್ರದೇಶವನ್ನು ನಿಗಧಿಪಡಿಸಲಾಗಿದೆ. ಮಹಾ ಯೋಜನೆ (ಪರಿಷ್ಕೃತ-I) ನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(3) ರನ್ವಯ ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ. ನಅಇ 92 ಬೆಮಪ್ರಾ 2010, ಬೆಂಗಳೂರು, ದಿನಾಂಕ: 28.12.2010.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ರಬಕವಿ-ಬನಹಟ್ಟಿ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾ ಯೋಜನೆ (ಪರಿಷ್ಕೃತ-I) ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 13(3) ರನ್ವಯ ಸರ್ಕಾರವು ಅಂತಿಮ ಅನುಮೋದನೆಯನ್ನು ಈ ಕೆಳಕಂಡ ನಿಬಂಧನೆಗೊಳಪಟ್ಟು ನೀಡಲಾಗಿದೆ.

**"ಈ ಆದೇಶದ ದಿನಾಂಕದಿಂದ 2 (ಎರಡು) ವರ್ಷಗಳವರೆಗೆ ಯೋಜನಾ ಪ್ರಾಧಿಕಾರವು ಯಾವುದೇ ತರಹದ ಭೂ ಉಪಯೋಗ ಬದಲಾವಣೆ ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಸಲ್ಲಿಸಕೂಡದು".**

ಮಹಾ. ಯೋಜನೆಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಮತ್ತು ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಎಂ.ಎಂ.ಹಿರೇಮಠ)**
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

೧) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು.
೨) ಅಧ್ಯಕ್ಷರು, ರಬಕವಿ-ಬನಹಟ್ಟಿ ನಗರ ಯೋಜನಾ ಪ್ರಾಧಿಕಾರ, ಬನಹಟ್ಟಿ.
೩) ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ಜಮಖಂಡಿ.
೪) ಕರ್ನಾಟಕ ರಾಜ್ಯಪತ್ರ.
೫) ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿಗಳು.